ಸರ್ಕಾರಿ ಗೋಮಾಳದಲ್ಲಿ ಬೆಳೆಸಿರುವ ನೀಲಗಿರಿ ತೋಪುಗಳ ಲೂಟಿ.

394 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಗೋಮಾಳದಲ್ಲಿ ಬೆಳೆಸಲಾಗಿರುವ ನೀಲಗಿರಿ ತೋಪುಗಳ ಲೂಟಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ತೋಪುಗಳ ರಕ್ಷಣೆಗೆ ಸರ್ಕಾರದ ಕ್ರಮವೇನು?

ಶ್ರೀ ಹೆಚ್. ವೈ. ಮೇಟಿ (ಅರಣ್ಯ ಸಚಿವರು) :

ಅ) ಒಂದೆರಡು ಸಣ್ಣಪುಟ್ಟ ಪ್ರಕರಣಗಳು ಗಮನಕ್ಕೆ ಬಂದಿದ್ದು, ಇವುಗಳನ್ನು ಪತ್ತೆ ಹಚ್ಚಲಾಗಿದೆ.

ಆ) ಸರ್ಕಾರದ ಆದೇಶ ಸಂಖ್ಯೆ. ಎಹೆಚ್ಎಫ್ಎಫ್. 232 ಪಿಎಸಿ. 86, ದಿನಾಂಕ 12.4.93 ರಲ್ಲಿನ ಮಾರ್ಗಸೂಚಿಯಂತೆ, ಜಂಟಿ ಅರಣ್ಯ ಯೋಜನೆ ಮತ್ತು ನಿರ್ವಹಣೆಯ ಮೂಲಕ ಬಲಿತ ನೆಡು ತೋಪುಗಳ ರಕ್ಷಣೆ ಮತ್ತು ಕಟಾವು ಮಾಡಲು ಗ್ರಾಮ ಅರಣ್ಯ ಸಮಿತಿಗಳನ್ನು ರಚಿಸಲಾಗಿದೆ. ನೆಡುತೋಪುಗಳ ರಕ್ಷಣೆಗಾಗಿ ನೆಡುತೋಪು ಕಾವಲುಗಾರರನ್ನು ನೇಮಿಸಿದೆ ಹಾಗೂ ಅರಣ್ಯ ರಕ್ಷಣಾ ಸಿಬ್ಬಂದಿಯು ರಾತ್ರಿ ಗಸ್ತನ್ನು ಮಾಡುವ ವ್ಯವಸ್ಥೆ ಇರುವುದು.

ಕುಣಿಗಲ್ ಪಟ್ಟಣದಲ್ಲಿ ಕ್ರೀಡಾಂಗಣ ನಿರ್ಮಾಣ

395 - ಶ್ರೀ ಎಸ್. ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ಪಟ್ಟಣದಲ್ಲಿ ಕ್ರೀಡಾಂಗಣ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದ ಕ್ರಮವೇನು?

ಶ್ರೀ ಅಜಯಕುಮಾರ್ ಸರನಾಯಕ್ (ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :

ಅ) ಹೌದು.

ಆ) ಕುಣಿಗಲ್‌ನಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಲು ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ. ಜಿಲ್ಲಾ ಪಂಚಾಯತ್ ಮತಿಯಿಂದ ಸೂಕ್ತ ಪ್ರಸ್ತಾವನೆ ಬಂದಲ್ಲಿ ಪರಿಗಣಿಸಲಾಗುವುದು.

ರಾಜ್ಯದಲ್ಲಿ ಹೊಸದಾಗಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ

397 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಈ ವರ್ಷ ಹೊಸದಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ.

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) 1) ಸರ್ಕಾರಿ ಕಾಲೇಜು ಮೈಸೂರು ನಗರ

2) ಸರ್ಕಾರಿ ಕಾಲೇಜು ಬನ್ನೂರು

3) ಸರ್ಕಾರಿ ಕಾಲೇಜು ಗುಡಿಬಂಡೆ

4) ಸರ್ಕಾರಿ ಕಾಲೇಜು ಹೇಸರಘಟ್ಟ ಬೆಂಗಳೂರು ಉತ್ತರ ತಾಲ್ಲೂಕು

5) ಸರ್ಕಾರಿ ಕಾನೂನು ಕಾಲೇಜು ಕೋಲಾರ (ಐದು ವರ್ಷದ ಎಲ್‌ಎಲ್ ಬಿ ಕೋರ್ಸ್)

6) ಸರ್ಕಾರಿ ಮಹಿಳಾ ಕಾಲೇಜು, ಬೈಲಹೊಂಗಲ

7) ಸರ್ಕಾರಿ ಕಾಲೇಜು ಪರಶುರಾಮಪುರ ಚಿತ್ರದುರ್ಗ ಜಿಲ್ಲೆ

8) ಸರ್ಕಾರಿ ಕಾಲೇಜು ಆಲೂರು

9) ಸರ್ಕಾರಿ ಕಾಲೇಜು, ಚನ್ನರಾಯಪಟ್ಟಣ

10) ಸರ್ಕಾರಿ ಕಾಲೇಜು ಕುಕ್ಕನೂರು.

ಮೈಸೂರಿನಲ್ಲಿ ನಡೆಯುವ ರಾಷ್ಟ್ರೀಯ ಕ್ರೀಡೆಗಳಿಗೆ ಸಂಬಂಧಪಟ್ಟ ಹಾಗೆ

398- ಶ್ರೀ ಇ. ಮಾರುತಿರಾವ್ ಪವಾರ್ (ನರಸಿಂಹರಾಜ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರಿನಲ್ಲಿ ರಾಷ್ಟ್ರೀಯ ಕ್ರೀಡೆಗಾಗಿ ಯಾವ-ಯಾವ ಆಟಗಳನ್ನು ನಡೆಸಲು ನಿರ್ಧರಿಸಲಾಗಿದೆ?

ಆ) ರಾಷ್ಟ್ರೀಯ ಕ್ರೀಡೆ ಸಂದರ್ಭದಲ್ಲಿ ಮಾತ್ರ ಕ್ರೀಡೆಗಳಿಗೆ ಸೀಮಿತವಾಗದೆ ಮೈಸೂರು ಜಿಲ್ಲೆಯ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಕ್ರೀಡಾ ಪಟುವಿನ ಸಾಮರ್ಥ್ಯ ಹೆಚ್ಚಿಸುವ ದೃಷ್ಟಿಯಿಂದ ಸರ್ಕಾರ ಯಾವ ಯಾವ ಕಾರ್ಯಕ್ರಮಗಳು ಹಮ್ಮಿಕೊಂಡಿದೆ?

ಶ್ರೀ ಅಜಯಕುಮಾರ್ ಸರನಾಯಕ್ (ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :

ಅ) ಮೈಸೂರಿನಲ್ಲಿ ನಾಲ್ಕನೇ ರಾಷ್ಟ್ರೀಯ ಕ್ರೀಡಗಳು ಕೆಳಕಾಣಿಸಿದ ಸ್ಪರ್ಧೆಗಳನ್ನು ನಡೆಸಲಾಗುವುದು.

1) ಅರ್ಚರಿ

2) ಹ್ಯಾಂಡ್ ಬಾಲ್